ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	457
ಮಾನ್ಯ ಸದಸ್ಯರ ಹೆಸರು	:	ಶ್ರೀ.ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ವಿಷಯ	:	ಬೀದರ್ ಜಿಲ್ಲೆಯ ಬೀದರ್ ಕೋಟೆಯ ಅಭಿವೃದ್ಧಿ ಬಗ್ಗೆ.
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ ಹಾಗೂ ರೇಷ್ಮೆ ಇಲಾಖೆ ಸಚಿವರು
ಉತ್ತರಿಸುವ ದಿನಾಂಕ	:	22-07-2019

ಕ್ರ. ಸ.	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯ ಪಾಪನಾಶ ಕೆರೆಯ, ಭಾಲ್ಕಿ, ಭಾತಂಬ್ರ, ಬಸವ ಕಲ್ಯಾಣ ಮತ್ತು ಬೀದರ್ ಕೋಟೆಗಳ ಅಭಿವೃದ್ಧಿಗಾಗಿ ರೂ.950.00 ಲಕ್ಷಗಳು ಮಂಜೂರಾಗಿದ್ದು, ಸದರಿ ಕಾಮಗಾರಿ ಪ್ರಾರಂಭವಾಗಿದೆಯೇ;	1. ಬೀದರ್ ಜಿಲ್ಲೆಯ ಬೀದರ್ ನಗರದಲ್ಲಿರುವ ಪಾಪನಾಶ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ರೂ.150.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. 2. ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿರುವ ಕೋಟೆ ಸಂರಕ್ಷಣೆ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. 3. ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಭಾತಂಬ್ರ ಗ್ರಾಮದಲ್ಲಿರುವ ಭಾತಂಬ್ರ ಕೋಟೆ ಸಂರಕ್ಷಣೆ ಅಭಿವೃದ್ಧಿ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. 4. ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿರುವ ಕೋಟೆ ಸಂರಕ್ಷಣೆ ಅಭಿವೃದ್ಧಿ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. 5. ಬೀದರ್ ಜಿಲ್ಲೆಯ ಬೀದರ್ ನಗರದಲ್ಲಿರುವ ಕೋಟೆ ಸಂರಕ್ಷಣೆ ಕಾಮಗಾರಿಯನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. ಮೇಲ್ಕಂಡ ಐದು ಕಾಮಗಾರಿಗಳನ್ನು ಕೈಗೊಳ್ಳಲು ತಾತ್ವಿಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.
ಆ)	ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ವೆಚ್ಚವಾಗಿದೆ ಮತ್ತು ಕಾಮಗಾರಿ ಯಾವ ಹಂತದಲ್ಲಿದೆ?	ಅಂದಾಜುಪಟ್ಟಿಗಳನ್ನು ಪಡೆದು, ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಪರಿಶೀಲಿಸುತ್ತಿದ್ದು, ಯಾವುದೇ ವೆಚ್ಚವಾಗಿರುವುದಿಲ್ಲ.

ಪ್ರಇ 36 ಪ್ರವಾವಿ 2019

(ಸಾ.ರಾ.ಮಹೇಶ್)
ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.